Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/ 66 /2022-23 ದಿನಾಂಕ : 17-5-2022

ದಿನಾಂಕ: 07-05-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

ದಿನಾಂಕ 07-05-2022 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲಿಗೆ ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ವೆಂಕಟೇಶ್ ರವರು ಮಾತನಾಡಿ ಈ ಕೆಳಗಿನ ವಿಷಯಗಳ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವಂತೆ ಕೋರಿದರು.

1. ಕವಿಲಕ್ಷ್ಮೀಶ ರಸ್ತೆ ಮತ್ತು ಕೆ.ಆರ್. ರಸ್ತೆಗಳಿಗೆ ಹೊಂದಿಕೊಂಡಂತಿರುವ ಪಾಲಿಕೆಯ ಜಾಗದಲ್ಲಿರುವ ಕಸ ಸಂಗ್ರಹಣಾ ಕೇಂದ್ರದಿಂದ ಸುತ್ತಮುತ್ತಲ ಸಾರ್ವಜನಿಕರಿಗೆ ಹಾಗೂ ನಿವಾಸಿಗಳಿಗೆ ತುಂಬಾ ತೊಂದರೆಯಾಗುತ್ತಿರುವುದರಿಂದ ಸದರಿ ಕಸ ಸಂಗ್ರಹಣಾ ಕೇಂದ್ರವನ್ನು ತೆರವುಗೊಳಿಸುವುದು.
2. ಪರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕುವುದನ್ನು ತಡೆಗಟ್ಟುವುದು.
3. ಸಜ್ಜನ್‌ರಾವ್ ಸರ್ಕಲ್ ಉದ್ಯಾನವನದಲ್ಲಿ ರಂಗಮಂದಿರ ನಿರ್ಮಿಸುವುದು.
4. ಮಾರ್ಕೆಟ್ ರಸ್ತೆ (ಫುಡ್ ಸ್ಟ್ರೀಟ್)ಯ ಹೋಟೆಲ್‌ಗಳಿಗೆ ಬರುವ ಗ್ರಾಹಕರ ವಾಹನಗಳನ್ನು ಪಕ್ಕದ ಕನ್ಸರ್‌ವೆನ್ಸಿಯಲ್ಲಿ ನಿಲ್ಲಿಸುವಂತೆ ಕ್ರಮ ವಹಿಸುವುದು.
5. ಎಂ.ಎಂ.ವಿ.ರಸ್ತೆ ಹಾಗೂ ನ್ಯಾಷನಲ್ ಹೈ ಸ್ಕೂಲ್ ರಸ್ತೆಗಳು ಸೇರುವ ಸ್ಥಳದಲ್ಲಿ ರಸ್ತೆ ಉಬ್ಬು (Road Hump) ಅನ್ನು ಹಾಕುವುದು.
6. ಎಂ.ಎಂ.ವಿ.ರಸ್ತೆಯಲ್ಲಿ ತೆರವುಗೊಳಿಸಿರುವ ಬೃಹತ್ ಗಾತ್ರದ ಮರದ ಡಿಮ್ಮಿಗಳನ್ನು ತೆರವುಗೊಳಿಸುವುದು.
7. ಡಯಾಗನಲ್ ರಸ್ತೆಯ ಪಾದಚಾರಿ ಮಾರ್ಗವನ್ನು ಸರಿಪಡಿಸುವುದು.
8. ರಾಮಯ್ಯಂಗಾರ್ ರಸ್ತೆಯ ಕನ್ಸರ್‌ವೆನ್ಸಿಯಲ್ಲಿ ಮಳೆ ನೀರು ಇಂಗು ಗುಂಡಿಯನ್ನು ಪರೀಕ್ಷಿಸಿ ಸ್ವಚ್ಛ ಮಾಡುವುದು.

ಈ ಮೇಲಿನ ಎಲ್ಲಾ ವಿಷಯಗಳ ಬಗ್ಗೆ ಮಾನ್ಯ ನೋಡಲ್ ಅಧಿಕಾರಿಗಳು ಚರ್ಚಿಸಲಾಗಿ ಸಂಬಂಧ ಪಟ್ಟ ಇಲಾಖೆಗಳ ಅಧಿಕಾರಿಗಳನ್ನು ಸಂಪರ್ಕಿಸಿ ಸಮನ್ವಯತೆಯಿಂದ ಸದರಿ ವಿಷಯಗಳ ಕುರಿತು ಸೂಕ್ತ ಕ್ರಮಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ಮಾನ್ಯ ನೋಡಲ್ ಅಧಿಕಾರಿಗಳು ಸೂಚಿಸಿದರು.

ನಂತರದಲ್ಲಿ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ರಾಜು ರವರು ಮಾತನಾಡಿ ಈ ಹಿಂದಿನ ಸಭೆಗಳಲ್ಲಿ ಚರ್ಚಿಸಲಾಗಿದ್ದ ಈ ಕೆಳಗಿನ ವಿಷಯಗಳ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವಂತೆ ಕೋರಿದರು.

1. ಆರ್.ವಿ.ರಸ್ತೆಯ ಟೀಚರ್ಸ್ ಕಾಲೇಜ್ ಬಳಿ ಬಸ್ ಶೆಲ್ಟರ್ ನಿರ್ಮಿಸುವುದು.
2. ಶ್ರೀ.ರಾಮ ಮಂದಿರ ರಸ್ತೆಯ ಕನ್ಸರ್‌ವೆನ್ಸಿಯಲ್ಲಿರುವ ಹಸುಗಳನ್ನು ಮತ್ತು ಶೆಡ್‌ಅನ್ನು ತೆರವುಗೊಳಿಸುವುದು.
3. ಎಂ.ಎನ್.ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗಕ್ಕೆ ಬೋಲ್ಯಾರ್ಡ್ಸ್‌ಗಳನ್ನು ಅಳವಡಿಸುವುದು.
4. ಸರ್ವೆಯರ್ ರಸ್ತೆ ಕನ್ಸರ್‌ವೆನ್ಸಿಯಲ್ಲಿರುವ "ನಾನ್‌ವೆಜ್" ಹೋಟೆಲ್ ಮತ್ತು ಹಾರ್ಡ್‌ವೇರ್ ಶಾಪ್ ಒತ್ತುವರಿ ಮಾಡಿರುವ ಜಾಗವನ್ನು ತೆರವುಗೊಳಿಸುವುದು.
5. ಕೆ.ಆರ್. ರಸ್ತೆಯಲ್ಲಿರುವ ನರ್ಸರಿಯನ್ನು ತೆರವುಗೊಳಿಸುವುದು.
6. ಕನಕಪುರ ರಸ್ತೆ ಮತ್ತು ವಾಸವಿ ದೇವಸ್ಥಾನದ ರಸ್ತೆಗಳು ಸೇರುವ ವಾಣಿವಿಲಾಸ ರಸ್ತೆ ಶೇಷ ಮಹಲ್ ಸರ್ಕಲ್‌ನಲ್ಲಿರುವ ಕಲ್ವರ್ಟ್‌ನಲ್ಲಿ ಹೂಳು ತುಂಬಿದ್ದು ಮಳೆ ಬಂದಾಗ ರಸ್ತೆಯಲ್ಲೆಲ್ಲಾ ನೀರು ತುಂಬಿಕೊಳ್ಳುವುದರಿಂದ ಕಲ್ವರ್ಟ್‌ನ್ನು ಸ್ವಚ್ಚ ಮಾಡುವುದು.
7. ಕನಕಪುರ ರಸ್ತೆಯಲ್ಲಿ ಹೊಸದಾಗಿ ಬ್ಯಾಹ್ಮಿನ್ಸ್ ಹೋಟೆಲ್ ಪ್ರಾರಂಭಿಸಿದ್ದು ಪಾದಚಾರಿ ಮಾರ್ಗ ಒತ್ತುವರಿ ಮಾಡಿ ಟೇಬಲ್ ಹಾಕಿರುವುದನ್ನು ತೆಗೆಯುವುದು.

ಈ ಎಲ್ಲಾ ವಿಷಯಗಳ ಬಗ್ಗೆ ಮಾನ್ಯ ನೋಡಲ್ ಅಧಿಕಾರಿಗಳು ಚರ್ಚಿಸಿ ಸಂಬಂಧಪಟ್ಟ ಇಲಾಖೆಗಳಾದ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್, ಪಶುಸಂಗೋಪನಾ ಇಲಾಖೆ, ಆರೋಗ್ಯ ಇಲಾಖೆ, ಪೋಲಿಸ್ ಇಲಾಖೆಗಳ ಅಧಿಕಾರಿಗಳನ್ನು ಸಂಪರ್ಕಿಸಿ ಸದರಿ ವಿಷಯಗಳ ಬಗ್ಗೆ ಸೂಕ್ತ ಕ್ರಮವಹಿಸುವಂತೆ ವಾರ್ಡ್‌ನ ಅಭಿಯಂತರರಿಗೆ ಮಾನ್ಯ ನೋಡಲ್ ಅಧಿಕಾರಿಗಳು ಸೂಚಿಸಿದರು.

ನಂತರ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ ಈ ಕೆಳಗೆ ಸೂಚಿಸಿರುವ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಬೇಕೆಂದು ಕೋರಿದರು. ಅವುಗಳೆಂದರೆ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಬೇಕೆಂದು ಕೋರಿದರು. ಅವುಗಳೆಂದರೆ

1. ಹಸಿಕಸಿ ಮತ್ತು ಒಣಕಸವನ್ನು ವಿಂಗಡಿಸಿಕೊಡುವಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಮಾಡುವುದು.
2. ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕುವುದನ್ನು ತಡೆಯುವುದು.
3. ಬೀಡಾಡಿ ಹಸುಗಳ್ನು ಹಿಡಿದು ತೊಂದರೆಯಾಗುವುದನ್ನು ತಡೆಯುವುದು.
4. ಈಸ್ಟ್ ಸರ್ಕಲ್ ರಸ್ತೆಯ ಎರಡೂ ಬದಿಯಲ್ಲಿ ವಾಹನಗಳನ್ನು ನಿಲ್ಲಿಸಿ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿರುವ ಬಗ್ಗೆ.
5. ರಸ್ತೆ ಗುಂಡಿಗಳಿದ್ದರೆ ಸಮರ್ಪಕವಾಗಿ ಮುಚ್ಚುವುದು.
6. ಒಣಗಿದ ಮರಗಳ ಕೊಂಬೆಗಳನ್ನು ತೆರವುಗೊಳಿಸುವುದು.

ಈ ಎಲ್ಲಾ ವಿಷಯಗಳ ಬಗ್ಗೆ ಸಭೆಯಲ್ಲಿ ಮಾನ್ಯ ನೋಡಲ್ ಅಧಿಕಾರಿಗಳು ಚರ್ಚಿಸಿ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳನ್ನು ಸಂಪರ್ಕಿಸಿ ಸೂಕ್ತ ಕ್ರಮಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –143 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)